## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಪ್ರತಿ ಜಿಲ್ಲೆಯಲ್ಲಿ ಸರ್ಕಾರಿ ಕಛೇರಿ ಸಂಕೀರ್ಣದಲ್ಲಿ ಮಹಿಳಾ ಸ್ವ-ಸಹಾಯ ಸಂಘಗಳಿಗೆ ಕ್ಯಾಂಟಿನ್ ಮತ್ತು ಮಾರಾಟ ಮಳಿಗೆಗಳನ್ನು ಸ್ಥಾಪಿಸುವ ಕುರಿತು.

**ಓದಲಾಗಿದೆ:** 1. 2022-23ನೇ ಸಾಲಿನ ಆಯವ್ಯಯ ಘೋಷಣ ಕಂಡಿಕೆ-204(ಉ)
2. ಸಂಜೀವಿನಿ-ಕೆಎಸ್‌ಆರ್‌ಎಲ್‌ಪಿಎಸ್ ಇವರ ಏಕ ಕಡತ ಸಂಖ್ಯೆ:kSRLPS/LH-NF/41/2021-22

******

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ:1ರಲ್ಲಿ ಮಾನ್ಯ ಮುಖ್ಯಮಂತ್ರಿಯವರು ಮಂಡಿಸಿದ 2022-23ನೇ ಸಾಲಿನ ಆಯವ್ಯಯ ಭಾಷಣದ ಘೋಷಣ ಕಂಡಿಕೆ-204(ಉ)ರಲ್ಲಿ ಮಹಿಳಾ ಸ್ವ-ಸಹಾಯ ಗುಂಪುಗಳನ್ನು ಉತ್ತೇಜಿಸಲು ಪ್ರತಿ ಜಿಲ್ಲೆಯಲ್ಲಿ ಕನಿಷ್ಠ ಒಂದು ಸರ್ಕಾರಿ ಕಛೇರಿ ಸಂಕೀರ್ಣದಲ್ಲಿ ಮಹಿಳಾ ಸ್ವ-ಸಹಾಯ ಸಂಘಗಳು ನಡೆಸುವ ಕ್ಯಾಂಟಿನ್ ಮತ್ತು ಮಾರಾಟ ಮಳಿಗೆಗಳನ್ನು ಸ್ಥಾಪಿಸಲಾಗುವುದು ಎಂದು ಘೋಷಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ:2ರಲ್ಲಿ ಅಭಿಯಾನ ನಿರ್ದೇಶಕರು, ರಾಷ್ಟ್ರೀಯ ಜೀವನೋಪಾಯ DAY-NRLM ಇವರು 2022-23ನೇ ಸಾಲಿನ ಆಯವ್ಯಯದ ಪ್ಯಾರಾ 204(ಉ) ರಲ್ಲಿ ಘೋಷಿಸಿರುವಂತೆ "ಮಹಿಳಾ ಸ್ವ-ಸಹಾಯ ಗುಂಪುಗಳನ್ನು ಉತ್ತೇಜಿಸಲು ಪ್ರತಿ ಜಿಲ್ಲೆಯಲ್ಲಿ ಕನಿಷ್ಠ ಒಂದು ಸರ್ಕಾರಿ ಕಛೇರಿ ಸಂಕೀರ್ಣದಲ್ಲಿ ಮಹಿಳಾ ಸ್ವಸಹಾಯ ಸಂಘಗಳು ನಡೆಸುವ ಕ್ಯಾಂಟೀನ್ ಮತ್ತು ಮಾರಾಟ ಮಳಿಗೆಯನ್ನು ಸ್ಥಾಪಿಸಲಾಗುವುದು" ಎಂದು ಘೋಷಿಸಲಾಗಿದ್ದು, ಅವುಗಳನ್ನು ಅನುಷ್ಠಾನಗೊಳಿಸಲು ಕೇಂದ್ರ ಹಾಗೂ ರಾಜ್ಯದ ಪಾಲಿನ ಅನುದಾನವನ್ನು ಹೊರತುಪಡಿಸಿ, ಹೆಚ್ಚುವರಿಯಾಗಿ ರೂ. 15.5 ಕೋಟಿಗಳ ಅನುದಾನವನ್ನು ರಾಜ್ಯ ಸರ್ಕಾರದಿಂದ ಬಿಡುಗಡೆ ಮಾಡುವಂತೆ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡ ಆದೇಶ

**ಸರ್ಕಾರದ ಆದೇಶ ಸಂಖ್ಯೆ:ಕೌಉಜೀಇ 58 ಉಜೀಇ 2022, ಬೆಂಗಳೂರು, ದಿನಾಂಕ:13-04-2022**

ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನಲೆಯಲ್ಲಿ ಮಾನ್ಯ ಮುಖ್ಯಮಂತ್ರಿಯವರು ಮಂಡಿಸಿದ 2022-23ನೇ ಸಾಲಿನ ಆಯವ್ಯಯ ಭಾಷಣದ ಘೋಷಣ ಕಂಡಿಕೆ-204(ಉ)ರಲ್ಲಿ ಘೋಷಿಸಿರುವಂತೆ ಮಹಿಳಾ ಸ್ವ-ಸಹಾಯ ಗುಂಪುಗಳನ್ನು ಉತ್ತೇಜಿಸಲು ಪ್ರತಿ ಜಿಲ್ಲೆಯಲ್ಲಿ ಕನಿಷ್ಠ ಒಂದು ಸರ್ಕಾರಿ ಕಛೇರಿ ಸಂಕೀರ್ಣದಲ್ಲಿ ಮಹಿಳಾ ಸ್ವಸಹಾಯ ಸಂಘಗಳು ನಡೆಸುವ ಕ್ಯಾಂಟೀನ್ ಮತ್ತು ಮಾರಾಟ ಮಳಿಗೆಯನ್ನು ಸ್ಥಾಪಿಸಲು ತಾತ್ವಿಕ ಅನುಮೋದನೆ ನೀಡಿ ಆದೇಶಿಸಿದೆ.

**ಷರತ್ತು:**

ಈ ಯೋಜನೆಯನ್ನು 2022-23ನೇ ಸಾಲಿನ ಆಯವ್ಯಯದಲ್ಲಿ ಒದಗಿಸಿರುವ ಅನುದಾನದಲ್ಲಿ ಪ್ರಾರಂಭಿಸಿ ತದನಂತರ ಹೆಚ್ಚುವರಿ ಅನುದಾನಕ್ಕಾಗಿ ಪ್ರತ್ಯೇಕವಾಗಿ ಪ್ರಸ್ತಾವನೆಯನ್ನು ಸಲ್ಲಿಸುವುದು.

ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಸಮನ್ವಯದೊಂದಿಗೆ ಪ್ರಸ್ತಾಪಿತ ಕಾರ್ಯಕ್ರಮವನ್ನು ಹಂತ ಹಂತವಾರು ಅನುಷ್ಠಾನಿಸಲು ಹಾಗೂ ಸದರಿ ಯೋಜನೆಗೆ ಸಮಗ್ರವಾದ ಮಾರ್ಗಸೂಚಿಯನ್ನು ತಯಾರಿಸಿಕೊಂಡು ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಸಂವರ್ಧನಾ ಸಂಸ್ಥೆಯ ಸಹಯೋಗದೊಂದಿಗೆ ಹಾಗೂ ನಿರ್ವಹಣಾ ವೆಚ್ಚವನ್ನು ಸರಿದೂಗಿಸಲು ದಿನಬಾಡಿಗೆಯನ್ನು ನಿಗದಿಪಡಿಸಿ ಸದರಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 278 ವೆಚ್ಚ-9/2022, ದಿ:08-04-2022 ಹಾಗೂ ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: PDS/76/MED/2022, ದಿನಾಂಕ:11-04-2022ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,
13/04/2022
(ರಂಗನಾಥ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು, (ಎ&ಇ), (ಜಿ&ಎಸ್.ಎಸ್.ಎ), (ಇ&ಆರ್.ಎಸ್.ಎ), ಕರ್ನಾಟಕ ಬೆಂಗಳೂರು.
2. ಆಯುಕ್ತರು, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ, ಬೆಂಗಳೂರು.
3. ಅಭಿಯಾನ ನಿರ್ದೇಶಕರು, ರಾಷ್ಟ್ರೀಯ ಜಿವನೋಪಾಯ, ಬೆಂಗಳೂರು.
4. ಖಜಾನಾಧಿಕಾರಿ, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
5. ಉಪ ನಿರ್ದೇಶಕರು, ಖಜಾನೆ ಎನ್.ಎಂ.ಸಿ ಖನಿಜ ಭವನ, ರೇಸ್ ಕೋರ್ಸ್‌ರೋಡ್, ಬೆಂಗಳೂರು.
6. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವೆಚ್ಚ 3& 9, ವಿಧಾನ ಸೌಧ ಬೆಂಗಳೂರು.

**ಪ್ರತಿ:-**

1. ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ & ಜೀವನೋಪಾಯ ಇಲಾಖೆ.
3. ಸರ್ಕಾರದ ಅಪರ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ & ಜೀವನೋಪಾಯ ಇಲಾಖೆ.
4. ಸರ್ಕಾರದ ಅಧೀನ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ.
5. ಅಧೀಕ್ಷಕರು, ಶಾಖೆ-1, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ & ಜೀವನೋಪಾಯ ಇಲಾಖೆ.
6. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.